# www.ogatugalu.com

## Kannada Ogatugalu List

| |
|---|
| ಅಂಕಡೊಂಕಿನ ಬಾವಿ ಹೊಕ್ಕು ನೋಡಿದ್ರೆ ಮುಕ್ಕ ನೀರಿಲ್ಲ -ಕಿವಿ |
| ಅಂಗಡಿಯಿಂದ ತರೋದು ಮುಂದಿಟ್ಟುಕೊಂಡು ಅಳೋದು -ಈರುಳ್ಳಿ |
| ಅಂಗಣ್ಣ ಮಂಗಣ್ಣ ಅಂಗಿ ಬಿಚ್ಚಿಕೊಂಡು ನುಂಗಣ್ಣ - ಬಾಳೆಹಣ್ಣು |
| ಅಂಗಳದಲ್ಲಿ ಹುಟ್ಟುವುದು, ಅಂಗಳದಲ್ಲಿ ಬೆಳೆಯುವುದು, ತನ್ನ ಮಕ್ಕಳ ಹಂಗಿಸಿ ಮಾತಾಡುವುದು ಇದು ಏನು? - ಕೋಳಿ |
| ಅಂಗೈ ಅಗಲದ ರೊಟ್ಟಿಗೆ ಲೆಕ್ಕವಿಲ್ಲದಷ್ಟು ಉಪ್ಪಿನಕಾಯಿ -ಆಕಾಶ, ನಕ್ಷತ್ರ |
| ಅಂಗೈ ಕೊಟ್ಟರೆ ಮುಂಗೈನೂ ನುಂಗುತ್ತದೆ - ಬಳೆ |
| ಅಕ್ಕ ಓದುತ್ತಾಳೆ ತಂಗಿ ನಡೀತ್ತಾಳೆ -ಕಣ್ಣು |
| ಅಕ್ಕ ಪಕ್ಕ ಚದುರಂಗ ,ಅದರ ಹೂವು ಪದುರಂಗ ಅದರ ಹೆಸರು ಅಯ್ಯಯ್ಯಪ್ಪ .ಇದು ಏನು? -ದತ್ತುರಿಯ ಮುಳ್ಳು. |
| ಅಕ್ಕನ ಮೇಲೆ ಛತ್ರಿ - ರೆಪ್ಪೆ |
| ಅಕ್ಷರಗಳಿದ್ದರೂ ಪುಸ್ತಕವಲ್ಲ,ಸಿಂಹವಿದ್ದರೂ ಅರಣ್ಯವಲ್ಲ,ದುಂಡಾಗಿದ್ದರೂ ಚಕ್ರವಲ್ಲ,ನಾನ್ಯಾರು. -ನಾಣ್ಯ |
| ಅಜ್ಜಿ ಗುದ್ದಿದರೆ ಮನೆಯೆಲ್ಲ ಮಕ್ಕಳು ಈಗ ಹೇಳಿ ನಾನ್ಯಾರು -ಬೆಳ್ಳುಳ್ಳಿ |
| ಅಟ್ಟದ ಮೇಲೆ ಪುಟ್ಟ ಲಕ್ಷ್ಮಿ -ಕುಂಕುಮ |
| ಅಣ್ಣ ಅತ್ತರೆ ತಮ್ಮನೂ ಅಳುತ್ತಾನೆ .-ಕಣ್ಣು |
| ಅನ್ನ ಮಾಡಲಿಕ್ಕೆ ಬಾರದಂತಹ ಅಕ್ಕಿ ಯಾವುದು-ಏಲಕ್ಕಿ |

www.ogatugalu.com

| |
|---|
| ಅಪ್ಪ ಆಕಾಶಕ್ಕೆ ಅವ್ವ ಪಾತಾಳಕ್ಕೆ ಮಗ ವ್ಯಾಪಾರಕ್ಕೆ ಮಗಳು ಮದುವೆಗೆ –ಅಡಿಕೆ ಮರ |
| ಅಬ್ಬಬ್ಬ ಹಬ್ಬ ಬಂತು, ಸಿಹಿಕಹಿ ಎರಡೂ ತಂತು .-ಯುಗಾದಿ |
| ಅಮ್ಮನ ಆಕಾಶವಾಣಿ ನಾನು -ಮಗು |
| ಆಕಾಶದಲ್ಲಿ ಕೊಡಲಿಗಳು ತೇಲಾಡುತ್ತವೆ - ಹುಣಸೇಹಣ್ಣು |
| ಆಕಾಶದೊಳಗಿನ ಗಿಣಿ ಊಟದ ಹೊತ್ತಿಗೆ ರಾಣಿ-ಬಾಳೆಲೆ |
| ಆರು ಕಾಲಿನ ಆನೆ, ಆನೆ ತಿನ್ನುತ್ತೆ ನೀರು ಕುಡಿಯಲ್ಲ -ನುಸಿ |
| ಆರು ಕಾಲು ಅಂಕಣ್ಣ ಮೂರು ಕಾಲು ದೊಂಕಣ್ಣ ಸದಾ ಮೀಸೆ ತಿರುವಣ್ಣ -ನೊಣ |
| ಇಡೀ ಮನೆಗೆಲ್ಲ ಒಂದೇ ಕಂಬಳಿ, ಬಾಯಿ ತೆರೆದರೆ ಮೂಗು ಮುಚ್ಚುತ್ತಿ -ಆಕಾಶ |
| ಇದ್ದಲು ನುಂಗುತ್ತ , ಗದ್ದಲ ಮಾಡುತ್ತಾ, ಉದ್ದಕ್ಕೂ ಓಡುತ್ತಾ ಮುಂದಕ್ಕೆ ಸಾಗುವ ನಾನ್ಯಾರು? - ರೈಲು |
| ಊಟಕ್ಕೆ ಕುಳಿತವರು ಹನ್ನೆರಡು ಜನರು, ಬಡಿಸುವವರು ಇಬ್ಬರು, ಒಬ್ಬನು ಒಬ್ಬರಿಗೆ ಬಡಿಸುವಷ್ಟರಲ್ಲಿ ಇನ್ನೊಬ್ಬನು ಹನ್ನೆರಡು ಜನಕ್ಕೂ ಬಡಿಸಿರುತ್ತಾನೆ- ಗಡಿಯಾರ |
| ಊಟಕ್ಕೆ ಮೊದಲು ನಾನು ಅಂತ ಬರುತ್ತೆ –ಬಾಳೆ ಎಲೆ , ತಟ್ಟೆ |
| ಊರಿಗೆಲ್ಲ ಒಂದೇ ಕಂಬಳಿ -ಆಕಾಶ |
| ಊರುಂಟು ಜನರಿಲ್ಲ ನದಿಯುಂಟು ನೀರಿಲ್ಲ – ಭೂಪಟ. |
| ಎಂದರೆ ತೆರಿತಾವ, ಅಪ್ಪ ಎಂದರೆ ಮುಚ್ಚುತಾವ -ಬಾಯಿ |
| ಎತ್ತ ಹೋದರು ಕುತ್ತಿಗೆಗೆ ಕೈ ಹಾಕುತ್ತಾರೆ! ನಾನ್ಯಾರು? -ಸಾಲಿಗ್ರಾಮ |

| |
|---|
| ಎರಡು ಬಾವಿಗಳ ನಡುವೆಯೊಂದು ಸೇತುವೆ -ಮೂಗು |
| ಎರಡು ಮನೆಗೆ ಒಂದೇ ದೂಲ -ಮೂಗು |
| ಎಲೆ ಇಲ್ಲ, ಸುಣ್ಣ ಇಲ್ಲ, ಬಣ್ಣವಿಲ್ಲ ತುಟಿ ಕೆಂಪಗಾಗಿದೆ, ಮಳೆಯಿಲ್ಲ , ಬೆಲೆಯಿಲ್ಲ , ಮೈ ಹಸಿರಾಗಿದೆ- ಗಿಳಿ |
| ಎಲ್ಲರ ಮನೆ ಅಜ್ಜಿಗೆ ಮೈಯೆಲ್ಲಾ ಕಜ್ಜಿ –ಜರಡಿ |
| ಒಂಟಿಕಾಲಿನ ಕುಂಟ. ನಾನ್ಯಾರು? -ಬುಗರಿ |
| ಒಂದು ಕಾಲಿನ ಪಕ್ಷಿಗೆ ಒಂಭತ್ತು ರೆಕ್ಕೆ, ಒಂದೇ ಕಾಲಲಿ ನಿಂತು ನೂರಾರು ಮೊಟ್ಟೆ ಇಡುತ್ತದೆ -ಜೋಳದ ದಂಟು |
| ಒಂದು ಕೊಂಬಿನ ಗುಳಿ ಅದರ ತಲೆಯೆಲ್ಲಾ ಮುಳ್ಳು .-ಬದನೆಕಾಯಿ. |
| ಒಂದು ತೇಲುತ್ತೆ ,ಒಂದು ಮುಳುಗುತ್ತೆ, ಒಂದು ಕರಗುತ್ತೆ .-ವಾರ,ತಿಂಗಳು,ವರ್ಷ |
| ಒಂದು ಬತ್ತಿ ಮನೆಯೆಲ್ಲ ಬೆಳಕು -ಸೂರ್ಯ |
| ಒಂದು ಮಡಕೆ, ಮಡಕೆಯೊಳಗೆ, ಕುಡಿಕೆ, ಕುಡಿಕೆಯಲ್ಲಿ ಸಾಗರ -ತೆಂಗಿನ ಕಾಯಿ |
| ಒಂದು ಮನೆಗೆ ಒಂದೇ ತೊಲೆ -ತಲೆ |
| ಒಂದು ಮನೆಯಲ್ಲಿ ಮೂರು ಜನ ಅಕ್ಕ-ತಂಗಿಯರಿದ್ದಾರೆ ಆದರೆ ಒಬ್ಬರ ಮುಖ ಕಂಡರೆ ಒಬ್ಬರಿಗೆ ಕಾಣೋಲ್ಲ-ಜಾದಳಕಾಯಿ |
| ಒಂದು ಮರ , ಮರದಾಗ ಅಲ್ಲ, ಅಲ್ಲಿನಾಗ ಕೊಬ್ರಿ ಗುಂಡ -ಆಕಾಶ ನಕ್ಷತ್ರ ಚಂದ್ರ |
| ಒಂದು ರುಮಾಲು ನಮ್ಮಪ್ಪನೂ ಸುತ್ತಲಾರ .-ದಾರಿ |
| ಒಂದು ಹಣ್ಣಿಗೆ ಹನ್ನೆರಡು ತೊಳೆ ಮತ್ತೂ ಮೂವತ್ತು ಬೀಜ -ವರ್ಷ |

| |
|---|
| ಒಂದು ಹಪ್ಪಳ ಊರಿಗೆಲ್ಲ ಊಟ – ಚಂದ್ರ |
| ಒಂದು ಹಸ್ತಕ್ಕೆ ನೂರೆಂಟು ಬೆರಳು -ಬಾಳೆಗೊನೆ |
| ಒಬ್ಬನನ್ನು ಹಿಡಿದರೆ ಎಲ್ಲಾರ ಮರ್ಜಿಯು ಗೊತ್ತಾಗುತ್ತದೆ. - ಅನ್ನದ ಅಗುಳು. |
| ಒಬ್ಬಳು ಮುಲುಗಿದಳು, ಒಬ್ಬಳು ಕರಗಿದಳು , ಒಬ್ಬಳು ತೇಲಿದಳು –ಅಡಿಕೆ , ಸುಣ್ಣ |
| ಕಂದ ಬಂದ ಕೊಂದ ತಂದ -ಶ್ರೀ ರಾಮ ಚಂದ್ರ |
| ಕಂಬ ಕಂಬದ ಮೇಲೆ ದಿಂಬ, ದಿಂಬದ ಮೇಲೆ ಲಾಗಲೂಟೆ, ಲಾಗಲೂಟೆ ಮೇಲೆ ಎರಡು ಹುಡ್ಗರು ಓಡ್ಯಾಡುತಾರೆ. -ಕಣ್ಣು. |
| ಕಡಿದರೆ ಕಚ್ಚೋಕೆ ಆಗೋಲ್ಲ , ಹಿಡದ್ರೆ ಮುಟ್ಟೋಕೆ ಸಿಗೋಲ್ಲ -ನೀರು |
| ಕಡ್ಲೆ ಕಾಳಷ್ಟು ಹಿಂಡಿ೩೨ ಮನೆ ಸಾರಿಸಿ ಬಚ್ಚಲ ಪಾಲು ಆಗುತ್ತೆ. -ಹಲ್ಲುಪುಡಿ. |
| ಕಣ್ಣಿಗೆ ಕಾಣೋದಿಲ್ಲ, ಕೈಗೆ ಸಿಗೋದಿಲ್ಲ –ಗಾಳಿ |
| ಕಣ್ಣಿಗೆ ಹತ್ತಿರ ಕಾಲಿಗೆ ದೂರ -ಬೆಟ್ಟ |
| ಕಣ್ಣಿಲ್ಲ, ಕಾಲಿಲ್ಲ ,ಆದರು ಚಲಿಸುತಿದೆ ಯಾವುದು ಎಲ್ಲಿದೆ ಬಲ್ಲಿದನ ಹೇಳಿರಲ. -ನದಿ |
| ಕತ್ತಲೆ ಮನೆಯಲಿ ಕಾಳವ್ವ ಕುಂತವ್ಳೆ ಕುಯ್ಯೋ, ಮರ್ರೋ ಅಂತವಳೇ -ತಂಬೂರಿ |
| ಕಪ್ಪು ಕಂಬಳಿ ನೆಂಟ ಎಲ್ಲವನು ನಾಶ ಮಾಡೋಕೆ ಹೊಂಟ -ಇಲಿ |
| ಕರಿ ಕಂಬ್ಳಿ ನೆಂಟ, ಸರೊತ್ತಿನಲ್ಲಿ ಹೊಂಟ, ಅವನ್ಯಾರು? : ಹೆಗ್ಗಣ |
| ಕರಿ ಗುಡ್ಡ-ಬಿಳಿ ನೀರು ಅದ್ರಾಗೆ ಕುಂತವಳೇ ಚಂಪರಾಣಿ. -ಗಡಿಗೆಮಜ್ಜಿಗೆ. |

| |
|---|
| ಕರಿ ಹುಡುಗನಿಗೆ ಬಿಳಿ ಟೋಪಿ –ಹೆಂಡದ ಮಡಿಕೆ |
| ಕರಿ ಹೊಲದ ಮದ್ಯದಲ್ಲಿ ಬೇಲಿ ದಾರಿ -ಬೈತಲೆ |
| ಕಲ್ಲರಳಿ ಹೂವಾಗಿ, ಎಲ್ಲರಿಗು ಬೇಕಾಗಿ,. ಮಲ್ಲಿಕಾರ್ಜುನನ ಶಿಖರಕ್ಕೆ ಬೆಳಕಾಗಿ. ಬಲ್ಲವರು ಹೇಳಿ ಸರ್ವಜ್ಞ” -ಸುಣ್ಣದ ಕಲ್ಲು! |
| ಕಲ್ಲರಳಿ ಹೂವಾಗಿ, ಎಲ್ಲರಿಗೂ ಬೇಕಾಗಿ, ಮಲ್ಲಿಕಾರ್ಜುನನ ಗುಡಿಗೆ ಬೆಳಕಾಗಿ, ಬಲ್ಲವರು ಹೇಳಿ –ಸುಣ್ಣ |
| ಕಲ್ಲಲ್ಲಿ ಹುಟ್ಟುವುದು, ಕಲ್ಲಲ್ಲಿ ಬೆಳೆಯುವುದು, ನೆತ್ತಿಯಲ್ಲಿ ಕುತಗುಟ್ಟುವುದು -ಸುಣ್ಣ |
| ಕಲ್ಲಿಲ್ಲದ ಬೆಟ್ಟ ಮರಳಿಲ್ಲದ ಮರುಭೂಮಿ -ಭೂಪಟ |
| ಕಲ್ಲು ಕೋಳಿ ಕುಗುತ್ತದೆ, ಮುಲ್ಲ ಚೂರಿ ಹಾಕುತ್ತಾನೆ .-ಗಿರಣಿ |
| ಕಲ್ಲು ತುಳಿಯುತ್ತೆ, ಮುಳ್ಳು ಮೆಯುತ್ತೆ, ನೀರು ಕಂಡ್ರೆ ನಿಲ್ಲುತ್ತೆ -ಚಪ್ಪಲಿ |
| ಕಾಂತಾಮಣಿ ಎಂಬ ಪಕ್ಷಿ, ಚಿಂತಾಮಣಿ ಎಂಬ ಕೆರೆ, ಕೆರೆಯಲ್ಲಿ ನೀರಿಲ್ದೆ ಹೋದ್ರೆ ಪಕ್ಷಿಗೆ ಮರಣ -ದೀಪ |
| ಕಾಡಿನಲ್ಲಿ ಹುಟ್ಟುವುದು ಕಾಡಿನಲ್ಲಿ ಬೆಳೆಯುವುದು ಕಡಿದಲ್ಲಿ ಕಂಪ ಸೂಸುವೆನು -ಶ್ರೀಗಂಧ |
| ಕಾಲಿಲ್ದ ಹುಡುಗಿಗೆ ಮಾರುದ್ದ ಕಡಿವಾಣ – ಸೂಜಿ |
| ಕಾಲಿಲ್ಲದೆ ನಡೆಯುವುದು ಬಾಯಿಲ್ಲದೆ ನುಡಿಯುವುದು ಇದರ ಹೊಟ್ಟೆ ಹಲವಕ್ಕೆ ಮನೆಯಾಗಿರುವುದು -ನದಿ |
| ಕಾಲಿಲ್ಲದೇ ನಡೆಯುವುದು, ತಲೆ ಎಲ್ಲಡೆ ನುಡಿಯುವುದು, ಮೇಲು ಕೆಳಗಾಗಿ ಓದುವುದು -ನದಿ |
| ಕಾಸಿನ ಕುದುರೆಗೆ ಬಾಲದ ಲಗಾಮು - ಸೂಜಿ ದಾರ |
| ಕಿರೀಟ ಇದೆ ರಾಜ ಅಲ್ಲ, ಕಲ ತಿಳಿಸುತ್ತೆ ಗಡಿಯಾರವಲ್ಲ-ಕೋಳಿ |

| |
|---|
| ಕುತ್ತಿಗೆ ಇದೆ ತಲೆ ಇಲ್ಲ, ತೋಳಿದೆ ಬೆರಳಿಲ್ಲ, ದಡಾ ಇದೆ, ಕಾಲಿಲ್ಲ. -ಅಂಗಿ. |
| ಕುದುರೆ ಬಾಲದಿಂದ ನೀರು ಕುಡಿಯುತ್ತದೆ -ಹೇನು |
| ಕೂಗಿದರೆ ರಾವಣ, ಹಾರಿದರೆ ಹನುಮಂತ, ಕೂತರೆ ಮುನಿ-ಕಪ್ಪೆ |
| ಕೆಂದ ಕುದುರೆ ,ಬಿಳಿ ತಡಿ, ಕರೆ ಲಗಾಮು, ಅಣ್ಣ ಅತ್ತಾನೆ, ತಮ್ಮ ಇಳಿತ್ತಾನೆ -ಬೆಂಕಿ, ಸುಣ್ಣ ಹಚ್ಚಿದ ಹಂಚು, ಹೊಗೆ, ರೊಟ್ಟಿ |
| ಕೆಂಪು ಕುದುರೆ ಕರಿ ತಡಿ ಒಬ್ಬ ಏರುತಾನೆ ಒಬ್ಬ ಇಳಿತಾನೆ -ರೊಟ್ಟಿ |
| ಕೆಂಪು ಕುದುರೆ ಮೇಲೆ ಒಬ್ಬ ಏರುತ್ತಾನೆ, ಒಬ್ಬ ಇಳಿಯುತ್ತಾನೆ . -ರೊಟ್ಟಿ, ದೋಸೆ |
| ಕೆಂಪು ಕುದುರೆಗೆ ಲಗಾಮು, ಒಬ್ಬ ಹತ್ತುತ್ತಾನೆ , ಇನ್ನೊಬ್ಬ ಇಳಿತಾನೇ -ಬೆಂಕಿ,ಬಾಣಲೆ, ದೋಸೆ |
| ಕೈಲಿದ್ದಾಗ ಗುದಿಸಾಡುತ್ತೇನೆ, ಕೈ ಬಿಟ್ಟಾಗ ಗೊರಕೆ ಒಡೆಯುತ್ತೇನೆ -ಕಸಪೊರಕೆ |
| ಕೊಳದ ಒಳಗೆ ಒಂದು ಮರ ಹುಟ್ಟಿ ,ಬೇರು ಇಲ್ಲ ,ನೀರು ಇಲ್ಲ.-ಎಣ್ಣೆ ದೀಪ. |
| ಗಂಟೆ ಹೊಡೆಯುತ್ತಾನೆ ಪೂಜಾರಿ ಅಲ್ಲ, PAPER ಅರಿಯುತ್ತಾನೆ ಆದರೆ ಹುಚ್ಚುನೂ ಅಲ್ಲ, ಹಣ ಕೇಳುತ್ತಾನೆ ಭಿಕ್ಷುಕ ಅಲ್ಲ –ಕಂಡಕ್ಟರ್ |
| ಗಿಡ ಕೊಡಲಾರದು, ಮರ ಬೆಳೆಸಲಾರದು ಅದಿಲ್ಲದೆ ಊಟ ಸೇರಲಾರದು -ಉಪ್ಪು |
| ಗುಂಡಾಕಾರ ಮೈಯೆಲ್ಲಾ ತೂತು -ದೋಸೆ |
| ಗುಡುಗು, ಗುಡುಗಿದರೆ ಸಾವಿರ ನಯನಗಳು ಅರಳುವುದು. -ನವಿಲು. |
| ಗೂಡಿನಲ್ಲಿನ ಪಕ್ಷಿ ನಾಡೆಲ್ಲ ನೋಡುತ್ತದೆ - ಕಣ್ಣು |
| ಗೂಡ್ನಲ್ಲಿರೋ ಜೋಡಿ ಪಕ್ಷಿ ಊರೆಲ್ಲ ನೋಡುತ್ತೆ -ಕಣ್ಣು |

| |
|---|
| ಗೋಡೆ ಗುದ್ದಪ್ಪ ನೀನಿದ್ದಲ್ಲಿ ನಿದ್ದೆ ಇಲ್ಲಪ್ಪ. -ತಿಗಣೆ |
| ಚರಚರ ಕೊಯ್ತುದೆ ಕತ್ತಿ ಅಲ್ಲ, ಮಿಣಿಮಿಣಿ ಮಿಂಚುತ್ತದೆ ಮಿಂಚಲ್ಲ, ಪೆಟ್ಟಿಗೆಗೆ ತುಂಬ್ತದೆ ದಾಗಿನ ಅಲ್ಲ.- ಗರಗಸ. |
| ಚಿಕ್ಕ ಬೆಟ್ಟದಲ್ಲಿ ಪುಟ್ಟ ಚಂದ್ರ. -ಕುಂಕುಮ |
| ಚಿಕ್ಕ ಬೋರನಿಗೆ ಬಾಲದಲ್ಲಿ ಕತ್ತಿ : ಹುರಳಿಕಾಯಿ |
| ಚಿಕ್ಕಕ್ಕನಿಗೆ ಪುಕ್ಕುದ್ದ -ಸೌಟು |
| ಚಿಣಿಮಿನಿ ಎನ್ನುವ ಕೆರೆ, ಚಿಂತಾಮಣಿ ಎನ್ನುವ ಹಕ್ಕಿ, ಕೆರೆ ಬತ್ತಿದರೆ ಹಕ್ಕಿಗೆ ಮರಣ –ದೀಪ |
| ಚಿನ್ನದ ಪೆಟ್ಟಿಗೆಯಲ್ಲಿ ಬೆಳ್ಳಿ ಲಿಂಗ - ಬಾಳೆ ಹಣ್ಣು |
| ಚೋಟುದ್ದ ಹುಡುಗಿಗೆ ಮಾರುದ್ದ ಜಡೆ – ಸೂಜಿ ದಾರ |
| ಜಂಬು ನೇರಳೆ ಮರ, ಎಳೆದರೆ ನಾಲ್ಕು ಬಾವಿ ನೀರು ಒಂದೇ ಆಗುತ್ತದೆ -ಮೇಡು |
| ತಕ್ಕಡೀಲಿ ಇಟ್ಟು ಮಾರೋ ಹಾಗಿಲ್ಲ, ಅದಿಲ್ಲದೆ ಹಬ್ಬ ಅಗೋ ಹಾಗಿಲ್ಲ. -ಸಗಣಿ. |
| ತಮ್ಮಂಗೆ ಮೂರು ಕಣ್ಣು ಅಮ್ಮಂಗೆ ಒಂದೇ ಕಣ್ಣು -ತೆಂಗಿನ ಕಾಯಿ |
| ತಲೆ ಇಲ್ಲ , ನಡು ಇಲ್ಲ , ಕೈಗಳಿದ್ದರು ಬೆರಳಿಲ್ಲ -ಕೋಟು ಅಂಗಿ |
| ತಿಂಡಿಗೆ ಕಡಿಮೆ ಇಲ್ಲ ,ತೀರ್ಥ ಕುಡಿದರೆ ಸಾವು –ವಿಷ |
| ದಾಸ್ ಬುರುಡೆ ದೌಲಥ ಬುರುಡೆ, ಲೋಕಕ್ಕೆಲ್ಲ ಎರಡೇ ಬುರುಡೆ -ಸೂರ್ಯ , ಚಂದ್ರ |
| ನನ್ನ ಕಂಡರೆ ಎಲ್ಲರು ಓದೀತಾರೆ –ಚೆಂಡು |
| ನಾ ಇರುವಾಗ ಬರುತ್ತೆ , ನಾ ಹೋದ ಮೇಲೂ ಇರುತ್ತೆ -ಕೀರ್ತಿ |

| |
|---|
| ನಾನು ತುಳಿದೆ ಅದನ್ನ, ಅದು ತುಳಿಯಿತು ನನ್ನನ್ನ .-ನೀರು |
| ನಾಲ್ಕು ಕಂಬಗಳುಂಟು ದೇವಾಲಯವಲ್ಲ; ಎರಡು ಮೊರಗಳುಂಟು ಕೇರಲಾಗುವುದಿಲ್ಲ; ಒಂದು ಕಹಳೆಯುಂಟು ಊದಲಾಗುವುದಿಲ್ಲ; ಹಾಗಾದರೆ ನಾನು ಯಾರು? : ಆನೆ |
| ನೀನಿಲ್ಲದೆ ಊಟವಿಲ್ಲ - ಉಪ್ಪು |
| ನೀರಿರೋತಾವ ನಿಲ್ಲಲೇ ಕೋಣ -ಚಪ್ಪಲಿ |
| ನೀರಿಲ್ಲದ ಸಮುದ್ರ, ಜನರಿಲ್ಲದ ಪಟ್ಟಣ, ಸಂಚಾರವಿಲ್ಲದ ಮಾರ್ಗಗಳು ಎಲ್ಲಿ? -ನಕ್ಷೆ |
| ನೀರು ಇರುತ್ತೆ ನದಿ ಅಲ್ಲ, ಬಾಗಿಲು ಇರುತ್ತೆ ಮನೆ ಅಲ್ಲ -ಕಣ್ಣು. |
| ನೀಲಿ ಕೆರೆಯಲಿ ಬಿಳಿ ಮೀನು -ನಕ್ಷತ್ರ |
| ನೀಲಿ ಸಾಗರದಲ್ಲಿ ಬೆಳ್ಳನೆ ಮೀನುಗಳು ನಾನ್ಯಾರು? -ತಾರೆಗಳು |
| ನೋಡಿದರೆ ಕಲ್ಲು ನೀರು ಹಾಕಿದರೆ ಮಣ್ಣು. -ಸುಣ್ಣ |
| ನೋಡಿದರೆ ನೋಟಗಳು ,ನಕ್ಕರೆ ನಗುಗಳು ,ಒಡೆದರೆ ತುಂಡುಗಳು. -ಕನ್ನಡಿ |
| ಬಂಗಾರದ ಗುಬ್ಬಿ ಬಾಲದಲ್ಲೇ ನೀರನ್ನು ಕುಡಿಯುತ್ತೆ -ಚಿಮಿಣಿ |
| ಬಡ ಬಡ ಬಂದ ಅಂಗಿ ಕಳಚಿದ ,ಬಾವಿಯೊಳಗೆ ಬಿದ್ದ. -ಬಾಳೆ ಹಣ್ಣು. |
| ಬರೋದ ಕಂಡು ಕೈ ಒಡ್ತಾರೆ. -ಬಸ್ |
| ಬಲಗೈಯಲ್ಲಿ ಗೀತೆ ಎಡಗೈಯಲ್ಲಿ ರಾಟೆ ಹಿಡಿದಿದ್ದೆ ನಾನು ಯಾರು -ಗಾಂಧೀಜಿ |
| ಬಾ ಅಂದರೆ ಬರೋಲ್ಲ , ಹೋಗು ಅಂದರೆ ಹೋಗೋಲ್ಲ -ಮಳೆ |

| |
|---|
| ಬಾಯಲ್ಲಿ ಹಲ್ಲಿಲ್ಲ, ಮಯಲ್ಲಿ ಶಕ್ತಿ ಇಲ್ಲ , ತಲೆಯಲ್ಲಿ ಕೂದಲಿಲ್ಲ , ಆದ್ರೂ ಎಲ್ರುನ್ನು ಕಾಡತಿನಿ ನಾನ್ಯಾರು. -ಸೊಳ್ಳೆ |
| ಬಿಡಿಸಿದರೆ ಹೂವು, ಮದಚಿದರೆ ಮೊಗ್ಗು ,ಇದು ಏನು? -ಛತ್ರಿ |
| ಬಿಳಿ ಆಕಾಶದಲ್ಲಿ ಕಪ್ಪು ನಕ್ಷತ್ರಗಳು,ಇದನ್ನು ನೋಡಲು ಜನ ಕಾದಿಹರು -ನಾಣ್ಯ |
| ಬಿಳಿ ಕುದುರೆಗೆ ಹಸಿರು ಬಾಲ. -ಮೂಲಂಗಿ |
| ಬಿಳಿ ಸರದಾರನಿಗೆ ಕರಿ ಟೋಪಿ -ಬೆಂಕಿಕಡ್ಡಿ |
| ಬಿಳಿ ಸಾಮ್ರಾಜ್ಯದಲ್ಲಿ ಕಪ್ಪು ಪ್ರಜೆಗಳು. -ಸೀತ ಫಲ |
| ಬಿಳಿ ಹುಲ್ಲಲ್ಲಿ ಕೆಂಪು ಕುರಿಮರಿ -ನಾಲಿಗೆ |
| ಬಿಳಿಯ ಹೊಲದಲ್ಲಿ ಕರಿ ಕಾಳು ಕೈಯಲ್ಲಿ ಬಿತ್ತುತ್ತಾರೆ ಬಾಯಲ್ಲಿ ಏತ್ತುತ್ತಾರೆ ನಾನು ಯಾರು : ಪುಸ್ತಕ ಮತ್ತು ಅಕ್ಷರಗಳು |
| ಬೆಳ್ಳಿ ಬಟ್ಟಲಲ್ಲಿ ಮುತ್ತಿನ ಬಿಂದು -ತಾರೆ |
| ಬೆಳ್ಳಿ ಸಮುದ್ರದಲ್ಲಿ ಕಪ್ಪು ಸೂರ್ಯ -ಕಣ್ಣು |
| ಮಣ್ಣು ಆಗಿದೆ ಕಲ್ಲು ಸಿಕ್ಕಿತು, ಕಲ್ಲು ಆಗಿದೆ ಬೆಳ್ಳಿ ಸಿಕ್ಕಿತು, ಬೆಳ್ಳಿ ಒಡೆದ ನೀರು ಸಿಕ್ಕಿತು -ತೆಂಗಿನಕಾಯಿ |
| ಮನೆ ಮೇಲೆ ಮಲ್ಲಿಗೆ ಹೂವು. -ಮಂಜು |
| ಮನೆ, ಮನೆಗೆರಡು ಬಾಗಿಲು, ಬಾಗಿಲ ಮುಂದೆ , ಮುಚ್ಚಿದರೆ ಹಾನಿ ಇದೇನು? - ಮೂಗು, ಬಾಯಿ |
| ಮರದೊಳಗೆ ಮರ ಹುಟ್ಟಿ ಮರ ಚಕ್ರ ಕಾಯಾಗಿ ತಿನ್ನಬಾರದ ಹಣ್ಣು ಬಲು ರುಚಿ -ಮನುಷ್ಯನ ಹುಟ್ಟು ಮಗು |
| ಮರನು ಮರನೇರಿ ಮತ್ತೆ ಮರನೇರಿ ಬಸವನಾ ಕತ್ತೇರಿ ತಿರುಗುತ್ತಿದೆ -ಗಾಣ |

| |
|---|
| ಮೂರು ಕಡೆ ನೀರು ನೆತ್ತಿ ಮೇಲೆ ಬೆಟ್ಟ ಹಾಗಾದರೆ ನಾನು ಯಾರು? : ಭಾರತ |
| ಮೂರು ಕಡೆ ನೀರು ನೆತ್ತಿ ಮೇಲೆ ಬೆಟ್ಟ ಹಾಗಾದರೆ ನಾನು ಯಾರು? : ಭಾರತ |
| ಮೂರು ಕಾಸಿನ ಕುದುರೆಗೆ ಮುನ್ನೂರು ರೂಪಾಯಿನ ಹಗ್ಗ -ಹೇನು ಕೂದಲು |
| ಮೂರೂ ಪಕ್ಷಿಗಳು ಗೂಡಿಗೆ ಹೋಗುವಾಗ ಬೇರೆ ಬೇರೆ ಬಣ್ಣ ಬರುವಾಗ ಬಣ್ಣ -ಎಲೆ ಅದಿಕೆ |
| ಮೇಲೆ ನೋಡಿದರೆ ನಾನಾ ಬಣ್ಣ, ಉಜ್ಜಿದರೆ ಒಂದೇ ಬಣ್ಣ. -ಸಾಬೂನು. |
| ಮೊಟ್ಟೆ ಒಡೆಯೋ ಹಾಗಿಲ್ಲ ಕೊಡ ಮುಳುಗಿಸೋ ಹಾಗಿಲ್ಲ ಬರಿ ಕೊಡೆ ತಗೊಂಡು ಬಾರೋ ಹಾಗಿಲ್ಲ -ತೆಂಗು |
| ಮೋಟು ಗೋಡೆ ಮೇಲೆ, ದೀಪ ಉರೀತಿದೆ. - ಮೂಗುಬೊಟ್ಟು |
| ರಾಮನಂತ ಸಮುದ್ರ ರತ್ನದಂತ ಮೀನು ನೀರು ಬತ್ತಿಹೋದ್ರೆ ಮೀನು ಸತ್ತು ಹೋಗುತ್ತೆ : ದೀಪ / ಹಣತೆ |
| ಲಟಪಟ ಲೇಡಿಗೆ ಒಂದೇ ಕಣ್ಣು -ಸೂಜಿ |
| ವನದಲ್ಲಿ ಹುಟ್ಟಿ ,ವನದಲ್ಲಿ ಬೆಳೆದು ,ವನದಿಂದ ಹೊರಟು ವನಜಲೊನೆ ಶಿರಕ್ಕೆರುವರು. -ಕಮಲ. |
| ಶತ್ತಗಿಂಡಿ, ಶಾರಾಗಿಂಡಿ, ನೀರಾಗಿ ಹಕ್ಕಿದರೆ ಮುಳುಗದು ಮುತ್ತಿನ ಗಿಂಡಿ. -ಬೆಣ್ಣೆ ಉಂಡೆ. |
| ಸಾಗರ ಪುತ್ರ ,ಸಾರಿನ ಮಿತ್ರ. - ಉಪ್ಪು |
| ಸಾವಿರ ತರುತ್ತೆ ಲಕ್ಷ ತರುತ್ತೆ ನೀರಿನಲ್ಲಿ ಹಾಕಿದರೆ ಸಾಯುತ್ತೆ. -ದುಡ್ಡು. |
| ಸಾವಿರಾರು ಹಕ್ಕಿಗಳು, ಒಂದೇ ಬಾರಿಗೆ ನೀರಿಗಿಳಿತವೆ. -ಅಕ್ಕಿ |
| ಸುಟ್ಟ ಹೆಣ ಮತ್ತೆ ಸುಡ್ತಾರೆ -ಇದ್ದಿಲು |
| ಸುತ್ತ ಮುತ್ತ ಸುಣ್ಣದ ಗೋಡೆ, ಎತ್ತ ನೋಡಿದರೂ ಬಾಗಿಲಿಲ್ಲ ಇದು ಏನು? - ಮೊಟ್ಟೆ |

| |
|---|
| ಸುದ್ದಿ ಸೂರಪ್ಪ ದೇಶವೆಲ್ಲಾ ಸುತ್ತಾಡ್ತಾನೆ. -ಪೋಸ್ಟ್ ಕಾರ್ಡ್ |
| ಸೂಜಿ ಸಣ್ಣಕಾಗೆ ಬಣ್ಣ – ಕೂದಲು |
| ಹಗಲಲ್ಲಿ ಮಾಯಾ ರಾತ್ರಿಯಲ್ಲಿ ಪ್ರತ್ಯಕ್ಷ ?ನಾನ್ಯಾರು ಹೇಳಿ? -ನಕ್ಷತ್ರ |
| ಹಗ್ಗ ಹಾಸಿದೆ ಕೋಣ ಮಲಗಿದೆ -ಕುಂಬಳಕಾಯಿ, ಬಳ್ಳಿ |
| ಹತ್ತಾರು ಮಕ್ಕಳ ತಂದೆ ಅದಕ್ಕೆ ತಲೆಯ ಮೇಲೆ ಜುಟ್ಟು -ಹುಂಜ |
| ಹಲ್ಲಿಲ್ಲದ ಹಕ್ಕಿಗೆ ಗೂಡು ತುಂಬ ಮರಿಗಳು. - ಕೋಳಿ |
| ಹಲ್ಲು ಹಾಕಿದರೆ ಹಾಲು ಕೆಡೋಲ್ಲ ಕಲ್ಲು ಹಾಕಿದರೆ ಕೆಡುತ್ತೇ -ಕಳ್ಳಿ |
| ಹಸಿರು ಕೋಟೆ, ಬಿಳಿ ಕೋಟೆ, ಕೆಂಪಿನ ಕೋಟೆ ಈ ಕೋಟೆಯೊಳಗೆ ಕಪ್ಪು ಸಿಪಾಯಿಗಳು -ಪರಂಗಿ ಹಣ್ಣು |
| ಹಸಿರು ಕೋಲಿಗೆ ಮುತ್ತಿನ ತುರಾಯಿ -ಜೋಳದ ತೆನೆ |
| ಹಸಿರು ಗಿಡದ ಮೇಲೆ ಮೊಸರು ಚೆಲ್ಲಿದೆ -ಮಲ್ಲಿಗೆ |
| ಹಸಿರು ಮುಖಕ್ಕೆ ವಿಪರೀತ ಕೋಪ , ಕೋಪ ಮಾಡಿಕೊಳ್ಳದೆ ನಾನ್ಯಾರೆಂದು ಹೇಳಿ? -ಮೆಣಸಿನಕಾಯಿ |
| ಹಸಿರು ಮೈ ಹಳದಿ ಮೈ ಪೇಟೇಲಿ ಕುಳಿತು ಎಲ್ಲರನ್ನು ಕರೆಯುತ್ತೆ -ಮಾವು |
| ಹಸಿರು ಹಾವರಾಣಿ, ತುಂಬಿದ ತತ್ರಾಣಿ, ಹೇಳದಿದ್ದರೆ ನಿಮ್ಮ ದೇವರಾಣಿ - ಕಲ್ಲಂಗಡಿ ಹಣ್ಣು |
| ಹಳ್ಳಿ ಗಡಿಯಾರ, ಒಳ್ಳೆ ಆಹಾರ -ಕೋಳಿ |
| ಹಾರಾಡುತ್ತಿದೆ ಗಾಳಿಪತವಲ್ಲ , ಬಣ್ಣ ಮೂರಿರುವುದು ಕಾಮನಬಿಲ್ಲಲ್ಲ -ಧ್ವಜ |
| ಹಾರಿದರೆ ಹನುಮಂತ ಕೂಗಿದರೆ ಶಂಖ. -ಕಪ್ಪೆ |

| |
|---|
| ಹಾರಿದರೆ ಹನುಮಂತ, ಕೂತರೆ ಮುನಿ, ಕೂಗಿದರೆ ಕಾಡಿನ ಒಡೆಯ -ಕಪ್ಪೆ |
| ಹಿಡಿದರೆ ಹಿಡಿಯಷ್ಟು ಬಿಟ್ಟರೆ ಮನೆತುಂಬ -ದೀಪದ ಬೆಳಕು |
| ಹುಟ್ಟುತ್ತಲೇ ಹುಡುಗ ತಲೆಯಲ್ಲಿ ಟೋಪಿ ಹಾಕಿರುತ್ತೆ . -ಬದನೆಕಾಯಿ. |
| ಹುಲಿಯ ಚಿಕ್ಕಮ್ಮ , ಇಲಿಯ ಮುಕ್ಕಮ್ಮ -ಬೆಕ್ಕು |
| ಹೊಂಚು ಹಾಕಿದ ದೆವ್ವ, ಬೇಡ ಬೇಡ ಎಂದರೂ ಜೊತೆಯೇ ಬರುತ್ತೆ. -ನೆರಳು |
| ಹೊಕ್ಕಿದ್ದು ಒಂದಾಗಿ ಹೊರಟಿದ್ದು ಅದು ನೂರಾಗಿ -ಶ್ಯಾವಿಗೆ |
| ಹೋಗುತ್ತಾ, ಬರುತ್ತಾ ಇರುವುದು ಎರಡು,ಹೋದ ಮೇಲೆ ಬರಲಾರವು ಎರಡು<br>-ಸಿರಿತನ -ಬಡತನ, ಪ್ರಾಣ -ಬಡತನ |
| ಹೋಗೋದು ಮುಳುಗೋದು ತರೋದು ಏನು? -ಬಿಂದಿಗೆ |
| ಹೋದ ನೆಂಟ, ಬಂದ ದಾರಿ ಗೊತ್ತಿಲ್ಲ -ನೆರಳು |
| ಹೋದರು ಇರುತ್ತೆ ಬಂದರೂ ಕಾಡುತ್ತೆ.ಇದು ಏನು? -ನೆನಪು |